# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 960

ಸದಸ್ಯರ ಹೆಸರು : ಶ್ರೀ ಆಯನೂರು ಮಂಜುನಾಥ್ (ಪದವೀಧರರ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 21/12/2021

ಉತ್ತರಿಸಬೇಕಾದ ಸಚಿವರು : ನಗರಾಭಿವೃದ್ಧಿ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ಜಮೀನು ಒತ್ತುವರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಸಾರ್ವಜನಿಕ ಹಿತಾಸಕ್ತಿ ರಿಟ್ ಅರ್ಜಿ ಸಂಖ್ಯೆ: 15511-14/2013 (ಪಿ.ಐ.ಎಲ್) ಹಿನ್ನೆಲೆಯಲ್ಲಿ ಅತಿಕ್ರಮಣ ತೆರವುಗೊಳಿಸಲು ಶಿವಮೊಗ್ಗ ಜಿಲ್ಲಾಧಿಕಾರಿಗಳು ಹಾಗೂ ಮಹಾನಗರ ಪಾಲಿಕೆ ಆಯುಕ್ತರು 2018-19ರಲ್ಲಿ ಕ್ರಮ ಕೈಗೊಂಡಿದ್ದು ನಿಜವೇ; | ಹೌದು. |
| ಆ) | ಹಾಗಿದ್ದಲ್ಲಿ, ಶಿವಮೊಗ್ಗ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಸರ್ಕಾರದ ಜಾಗ/ಭೂಮಿ ಅತಿಕ್ರಮಣವಾದ ವಾರ್ಡುವಾರು ವಿವರವಾದ ಮಾಹಿತಿಯನ್ನು ಹಾಗೂ ಜಾಗದ ಮೌಲ್ಯವನ್ನು ನೀಡುವುದು; | ಶಿವಮೊಗ್ಗ ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ 254 ಸರ್ಕಾರಿ ಜಾಗ ಮತ್ತು ಭೂಮಿಗಳ ಅತಿಕ್ರಮಣವಾಗಿರುವ ವಾರ್ಡ್ ವಾರು ಪಟ್ಟಿ ಹಾಗೂ ಅವುಗಳ ಅಂದಾಜು ಮೌಲ್ಯದ ವಿವರವನ್ನು **ಅನುಬಂಧ-1** ರಲ್ಲಿ ನೀಡಲಾಗಿದೆ. |
| ಇ) | ಅತಿಕ್ರಮಣ ತೆರವುಗೊಳಿಸಲು ಕೈಗೊಂಡ ಕ್ರಮದ ಮಾಹಿತಿ ನೀಡುವುದು; ಇಲ್ಲವಾದಲ್ಲಿ, ಯಾವ ಕಾರಣಕ್ಕಾಗಿ ಕ್ರಮಕೈಗೊಳ್ಳದಿರುವ ಬಗ್ಗೆ ವಿವರವಾದ ಮಾಹಿತಿ ನೀಡುವುದು; | ಈಗಾಗಲೇ ವಾರ್ಡ್ ವಾರು ಪಟ್ಟಿಯಲ್ಲಿರುವ ಹಲವು ಪ್ರಕರಣಗಳ ಒತ್ತುವರಿದಾರರಿಗೆ ಮಹಾನಗರ ಪಾಲಿಕೆಯಿಂದ ತಿಳುವಳಿಕೆ ನೋಟೀಸನ್ನು ನೀಡಲಾಗಿರುತ್ತದೆ. |
| ಈ) | ಅತಿಕ್ರಮಣ ತೆರವು ವಿಚಾರದಲ್ಲಿ ಅಧಿಕಾರಿಗಳು ಲಂಚದ ಹಣ ಪಡೆದು ತೆರವುಗೊಳಿಸುವುದನ್ನು ಕೈ ಬಿಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹ ಅಧಿಕಾರಿಗಳ ಮೇಲೆ ಕೈಗೊಂಡ ಕ್ರಮವೇನು? | ಅತಿಕ್ರಮಣ ತೆರವು ವಿಚಾರದಲ್ಲಿ ಮಹಾನಗರ ಪಾಲಿಕೆಯ ಅಧಿಕಾರಿಗಳು ಲಂಚದ ಹಣ ಪಡೆದು ತೆರವುಗೊಳಿಸುವುದನ್ನು ಕೈ ಬಿಟ್ಟಿರುವ ಯಾವುದೇ ಪ್ರಕರಣಗಳು ವರದಿಯಾಗಿರುವುದಿಲ್ಲ. |

ಸಂಖ್ಯೆ: ನಅಇ 49 ಶಿಮಪಾ 2021(ಇ)

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು